**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರ ಹೇಳಿಕೆ.**

**ವಿಷಯ:**

ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಸುಮಾರು 15 ವರ್ಷಗಳಿಂದ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರದೆ ಇರುವುದರಿಂದ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಗಳಲ್ಲಿ ಎಐಸಿಟಿಇ ನಿಯಮಾನುಸಾರ ಬೋಧಕ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳದೆ ಇರುವುದರಿಂದ ಗುಣಾತ್ಮಕ ಶಿಕ್ಷಣ ನೀಡುವಲ್ಲಿ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು.

**ಉತ್ತರ**

ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಸಂದರ್ಭದಲ್ಲಿ ಸರ್ಕಾರದ ಆದೇಶ ಸಂಖ್ಯೆ:ಡಿಪಿಎಆರ್ 97 ಎಸ್ ಆರ್‌ಡಿ 2004, ದಿ:08.10.2004ರಲ್ಲಿ ನೀಡಲಾಗಿರುವ ಮಾರ್ಗಸೂಚಿಗಳನ್ನು ಅಳವಡಿಸಿಕೊಂಡು ಕ್ರಮ ವಹಿಸಬೇಕಾಗಿರುತ್ತದೆ.

ಅದರನ್ವಯ ಸಂಸದೀಯ ವ್ಯವಹಾರಗಳು ಮತ್ತು ಶಾಸಕಾಂಗ ರಚನೆ ಇಲಾಖೆ ಮತ್ತು ಆರ್ಥಿಕ ಇಲಾಖೆ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಸೇವಾ ನಿಯಮಗಳು) ಇಲಾಖೆಗಳೊಂದಿಗೆ ಸಮಾಲೋಚಿಸಿ, ಸದರಿ ಇಲಾಖೆಗಳ ಅಭಿಪ್ರಾಯ ಪಡೆದು ನಂತರದಲ್ಲಿ ವೃಂದ ಪರಿಷ್ಕರಣಾ ಸಮಿತಿಯ ಒಪ್ಪಿಗೆ ಮೇರೆಗೆ ಆಡಳಿತ ಇಲಾಖೆಯು ಕ್ರಮವಹಿಸಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ಇಲಾಖೆಯು ಈಗಾಗಲೇ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಕ್ರಮವಹಿಸಲಾಗಿದ್ದು, ವಿವರ ಕೆಳಕಂಡಂತಿದೆ.

- ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಚಾಲ್ತಿಯಲ್ಲಿದ್ದ 2006 ಮತ್ತು 2008ರ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿನ ಕೆಲವೊಂದು ಹುದ್ದೆಗಳಿಗೆ ತಿದ್ದುಪಡಿ/ಸೇರ್ಪಡೆ ಮಾಡುವ ಸಂಬಂಧ ನಿರ್ದೇಶನಾಲಯದ ಪತ್ರ ಸಂಖ್ಯೆ:ಡಿಟಿಇ/47/ಇಎಸ್‌ಟಿ(1)ಎ/ 2007, ದಿನಾಂಕ:15.03.2010ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಅಧ್ಯಾಪಕ ಬೋಧಕ ವೃಂದದವರಿಗೆ ಎಐಸಿಟಿಇಯು ಕಾಲಕಾಲಕ್ಕೆ ನಿಗದಿ ಪಡಿಸುವ ವೇತನಗಳನ್ನು ವಿಸ್ತರಿಸುತ್ತಾ ಬಂದಿದ್ದು, ವಿದ್ಯಾರ್ಹತೆಯನ್ನು ಸಹ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅಳವಡಿಸಿಕೊಳ್ಳಬೇಕಾಗಿರುತ್ತದೆ. ಎಐಸಿಟಿಇ 05.03.2010ರಲ್ಲಿ ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಿರುತ್ತದೆ. ಈ ಸಂಬಂಧ ಸರ್ಕಾರದ ಪತ್ರ ಸಂಖ್ಯೆ:ಇಡಿ 170 ಡಿಟಿಇ 2009, ದಿನಾಂಕ:11.06.2010ರಲ್ಲಿ ಎಐಸಿಟಿಇಯ ಪರಿಷ್ಕೃತ ಮಾರ್ಗಸೂಚಿಗಳನ್ವಯ ಪರಿಶೀಲಿಸಿ ಪರಿಷ್ಕೃತ ಪ್ರಸ್ತಾವನೆಯನ್ನು ಸಲ್ಲಿಸುವಂತೆ ನಿರ್ದೇಶಿಸಲಾಗಿರುತ್ತದೆ. ಅದರಂತೆ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಪತ್ರ ಸಂಖ್ಯೆ:ಡಿಟಿಇ 47 ಇಎಸ್‌ಟಿ(1) ಎ 2008, ದಿನಾಂಕ:12.08.2010ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ 2006 ಮತ್ತು 2008ರ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ/ಸೇರ್ಪಡೆ ಮಾಡುವ ಕರಡು ನಿಯಮಾವಳಿಯನ್ನು ರಚಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು.

....2

- ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ತಿದ್ದುಪಡಿ ತರುವ ಸಲುವಾಗಿ ಸರ್ಕಾರದ ಹಂತದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಕಾನೂನು ಇಲಾಖೆ ಹಾಗೂ ಆರ್ಥಿಕ ಇಲಾಖೆಗಳೊಂದಿಗೆ ಸಭೆಗಳನ್ನು ನಡೆಸಿ, ಸದರಿ ಸಭೆಗಳಲ್ಲಿ ನೀಡಿದ ಸೂಚನೆ/ ಮಾರ್ಗದರ್ಶನಗಳನ್ನು ಅಳವಡಿಸಿಕೊಳ್ಳಲಾಗಿರುತ್ತದೆ.

- 2012 ಮತ್ತು 2016ರಲ್ಲಿ ಎಐಸಿಟಿಇಯ ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಲಾಗಿದ್ದು, ಸದರಿ ಪರಿಷ್ಕೃತ ಮಾರ್ಗಸೂಚಿಗಳನ್ನು ಅಳವಡಿಸಿಕೊಂಡು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಹಿರಿಯ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಿ, ಇಲಾಖೆಯ ವೃಂದ ಮತ್ತು ನೇಮಕಾತಿಗೆ ತಿದ್ದುಪಡಿ ತರುವ ಸಂಬಂಧ ನಿರ್ದೇಶನಾಲಯದ ಪತ್ರ ಸಂಖ್ಯೆ:ಡಿಟಿಇ 59 ಇಎಸ್‌ಟಿ(1) ಎ 2013 ದಿ:24.06.2017ರಲ್ಲಿ ಸಮಗ್ರವಾಗಿ ಪರಿಶೀಲಿಸಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ.

- ಸರ್ಕಾರದ ಪತ್ರ ಸಂಖ್ಯೆ:ಇಡಿ 91 ಡಿಟಿಇ 2017, ದಿ:23.01.2018ರಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಕೆಲವೊಂದು ಅವಲೋಕನೆಗಳನ್ನು ಮಾಡಿದ್ದು, ಸದರಿ ಅವಲೋಕನೆಗಳನ್ನು ಅಳವಡಿಸಿಕೊಂಡು ಪರಿಷ್ಕರಿಸಿದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. ಅದರಂತೆ ನಿರ್ದೇಶನಾಲಯದ ಪತ್ರ ಸಂಖ್ಯೆ:ಡಿಟಿಇ 59 ಇಎಸ್‌ಟಿ (1) ಎ 2013, ದಿ:20.03.2018ರಲ್ಲಿ ಕರಡು ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು ಮತ್ತೊಮ್ಮೆ ಸಮಗ್ರವಾಗಿ ಪರಿಶೀಲಿಸಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ.

- ಸರ್ಕಾರದ ಆದೇಶ ಸಂಖ್ಯೆ:ಇಡಿ 35 ಡಿಟಿಇ 2018, ದಿ:02.11.2019ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಕೆಲವೊಂದು ಹುದ್ದೆಗಳನ್ನು ರದ್ದುಗೊಳಿಸಿ ಹಾಗೂ ಕೆಲವು ಹುದ್ದೆಗಳ ಮರು ಸೃಜನೆ ಮತ್ತು ಮರುಪದನಾಮೀಕರಣಗೊಳಿಸಿ ಪ್ರಸ್ತಾಪಿತ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅಳವಡಿಸಿಕೊಂಡು ಮರು ಪ್ರಸ್ತಾವನೆಯನ್ನು ಸಲ್ಲಿಸಲು ಸೂಚಿಸಲಾಗಿರುತ್ತದೆ. ಅದರಂತೆ, ಅಳವಡಿಸಿಕೊಂಡು ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು ನಿರ್ದೇಶನಾಲಯದ ಪತ್ರ ಸಂಖ್ಯೆ:ಡಿಟಿಇ 59 ಇಎಸ್‌ಟಿ (1)ಎ 2013 (ಭಾಗ-1), ದಿ:12.12.2019ರಲ್ಲಿ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.

- ಸರ್ಕಾರದ ಪತ್ರ ಸಂ:ಇಡಿ 91 ಡಿಟಿಇ 2017, ದಿ:04.06.2020ರಲ್ಲಿ ವೃಂದ ಪರಿಶೀಲನಾ ಉಪ ಸಮಿತಿಯ ಸದಸ್ಯ ಇಲಾಖೆಯಾದ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ತಿಳಿಸಿರುವ ಕೆಲವೊಂದು ಅಂಶಗಳನ್ನು ವೃಂದ ಮತ್ತು ನೇಮಕಾತಿ ಕರಡು ನಿಯಮಗಳಲ್ಲಿ ಅಳವಡಿಸಿಕೊಂಡು ಪರಿಷ್ಕೃತ ಪ್ರಸ್ತಾವನೆಯನ್ನು ಮಂಡಿಸುವಂತೆ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರಿಗೆ ತಿಳಿಸಲಾಗಿರುತ್ತದೆ.

- ಏತನ್ಮಧ್ಯೆ, ಎಐಸಿಟಿಇ ನವದೆಹಲಿ ಇವರು 7ನೇ ಪರಿಷ್ಕೃತ ವೇತನ ಶ್ರೇಣಿಯನ್ನು 01.03.2019ರಂದು ಗೆಜೆಟ್ ಮುಖಾಂತರ ಹೊರಡಿಸಲಾಗಿದ್ದು, ರಾಜ್ಯದಲ್ಲಿನ ಸರ್ಕಾರಿ/ ಅನುದಾನಿತ/ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳ ಬೋಧಕ ಸಿಬ್ಬಂದಿಗಳಿಗೆ ಅನ್ವಯಿಸುವಂತೆ ಕ್ರಮವಾಗಿ ದಿನಾಂಕ:01.01.2016 ರಿಂದ ಇಂಜಿನಿಯರಿಂಗ್ ಮತ್ತು ದಿನಾಂಕ:01.04.2018 ರಿಂದ ಪಾಲಿಟೆಕ್ನಿಕ್‌ಗಳಿಗೆ 7ನೇ ಪರಿಷ್ಕೃತ ಎಐಸಿಟಿಇ ವೇತನ ಶ್ರೇಣಿಯನ್ನು ವಿಸ್ತರಿಸಲಾಗಿದೆ. ರಾಜ್ಯ ಸರ್ಕಾರವು

...3

ದಿ:22.03.2020ರಲ್ಲಿ ಇಂಜಿನಿಯರಿಂಗ್ ಸಂಸ್ಥೆಗಳಿಗೆ ಹಾಗೂ ದಿ:24.03.2020ರಲ್ಲಿ ಪಾಲಿಟೆಕ್ನಿಕ್ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಆದೇಶ ಹೊರಡಿಸಿರುತ್ತದೆ. 7ನೇ ಪರಿಷ್ಕೃತ ಎಐಸಿಟಿಇ ವೇತನ ಶ್ರೇಣಿಯನ್ವಯ ಬೋಧಕ ಸಿಬ್ಬಂದಿಗಳ ನೇಮಕಾತಿ ವಿಧಾನ ಹಾಗೂ ವಿದ್ಯಾರ್ಹತೆ ಮತ್ತು ಸೇವಾ ಷರತ್ತುಗಳನ್ನು ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅಳವಡಿಸಿಕೊಳ್ಳಬೇಕಾಗಿರುತ್ತದೆ.

- ತತ್ಸಂಬಂಧ ಎಐಸಿಟಿಇ 7ನೇ ಪರಿಷ್ಕೃತ ವೇತನ ಶ್ರೇಣಿಯನ್ವಯ ಮತ್ತು ಎಐಸಿಟಿಇ ಯ ಇತರ ಮರ್ಗಸೂಚಿಗಳನ್ನು ಹಾಗೂ ರಾಜ್ಯ ಸರ್ಕಾರದ ನಿಯಮ/ಆದೇಶ/ ಮಾರ್ಗಸೂಚಿಗಳನ್ನು ಅಳವಡಿಸಿಕೊಂಡು, ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸಿ, ನೂತನ ಕರಡು ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸಿ, ಆಯುಕ್ತಾಲಯದ ಪತ್ರ ಸಂಖ್ಯೆ: ಡಿಟಿಇ 2021 (1) ಇಎಸ್‌ಟಿ 26, ದಿನಾಂಕ:02.02.2022ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ.

- ಸರ್ಕಾರದ ಪತ್ರ ಸಂಖ್ಯೆ:ಇಡಿ 40 ಡಿಟಿಇ 2022 (ಭಾಗ-3), ದಿ:19.04.2022ರಲ್ಲಿ ಸಂಸದೀಯ ವ್ಯವಹಾರಗಳು ಮತ್ತು ಶಾಸಕಾಂಗ ಇಲಾಖೆಯು ನೀಡಿರುವ ಅಭಿಪ್ರಾಯದ ಹಿನ್ನೆಲೆಯಲ್ಲಿ ಪರಿಶೀಲಿಸಿ, ಸ್ಪಷ್ಟೀಕರಣದೊಂದಿಗೆ ಪರಿಷ್ಕೃತ ಪ್ರಸ್ತಾವನೆಯನ್ನು ಸಲ್ಲಿಸಲು ಸೂಚಿಸಲಾಗಿದ್ದು, ಈ ಸಂಬಂಧ ಆಯುಕ್ತಾಲಯದ ಪತ್ರ ಸಂಖ್ಯೆ:ಡಿಟಿಇ 26 ಇಎಸ್‌ಟಿ(6) 2021, ದಿ:28.04.2022ರಲ್ಲಿ ಕಂಡಿಕೆವಾರು ಸ್ಪಷ್ಟೀಕರಣದೊಂದಿಗೆ ಪರಿಷ್ಕೃತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ.

- ಸರ್ಕಾರದ ಪತ್ರ ಸಂಖ್ಯೆ:ಇಡಿ 40 ಡಿಟಿಇ 2022, (ಭಾಗ-1) ದಿ:09.05.2022ರಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಭಿಪ್ರಾಯದಂತೆ ಇಲಾಖೆಯಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಹಾಗೂ ಪರಿಷ್ಕರಿಸಲು ಉದ್ದೇಶಿಸಲಾಗಿರುವ ವೃಂದಗಳಿಗೆ ತುಲನಾತ್ಮಕ ಪಟ್ಟಿಯನ್ನು ಸಲ್ಲಿಸುವಂತೆ ಸೂಚಿಸಲಾಗಿದ್ದು, ಈ ಸಂಬಂಧ ಆಯುಕ್ತಾಲಯದ ಪತ್ರ ಸಂಖ್ಯೆ:ಡಿಟಿಇ 26 ಇಎಸ್‌ಟಿ (1) 2021, ದಿ:16.05.2022ರಲ್ಲಿ ಸರ್ಕಾರದ ಆದೇಶ ಸಂಖ್ಯೆ:ಡಿಪಿಎಆರ್ 97 ಎಸ್‌ಆರ್‌ಡಿ 2004, ದಿ:08.10.2004ರ ನಮೂನೆ 07ನ್ನು ಭರ್ತಿ ಮಾಡಿ ಸರ್ಕಾರದ ಮುಂದಿನ ಕ್ರಮಕ್ಕಾಗಿ ಸಲ್ಲಿಸಲಾಗಿರುತ್ತದೆ.

- ಸರ್ಕಾರದ ಪತ್ರ ಸಂಖ್ಯೆ:ಇಡಿ 40 ಡಿಟಿಇ 2022 (ಭಾಗ-3), ದಿ:0.07.2022ರಲ್ಲಿ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಯು ನೀಡಿರುವ ಅಭಿಪ್ರಾಯದಂತೆ ಮತ್ತು ಸರ್ಕಾರದ ಪತ್ರ ಸಂಖ್ಯೆ:ಇಡಿ 40 ಡಿಟಿಇ 2022, (ಭಾಗ-2) ದಿ:04.08.2022ರಲ್ಲಿ ಆರ್ಥಿಕ ಇಲಾಖೆಯ ಅಭಿಪ್ರಾಯ ಹಾಗೂ ಸರ್ಕಾರದ ಪತ್ರ ಸಂಖ್ಯೆ:ಇಡಿ 40 ಡಿಟಿಇ 2022 (ಭಾಗ-1), ದಿ:20.08.2022ರಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅವಲೋಕನ ಮತ್ತು ಅಭಿಪ್ರಾಯದಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಿ ಸಲ್ಲಿಸುವಂತೆ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರಿಗೆ ಸೂಚಿಸಲಾಗಿತ್ತು.

- ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹಾಗೂ ಆರ್ಥಿಕ ಇಲಾಖೆಯ ಅಭಿಪ್ರಾಯ/ ಅವಲೋಕಗಳನ್ವಯ ಪರಿಶೀಲಿಸಿ ಅದರಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಿ ಆಯುಕ್ತಾಲಯದ ಪತ್ರ ಸಂಖ್ಯೆ:ಡಿಟಿಇ 26 ಇಎಸ್‌ಟಿ(1) 2021, ದಿ:08.12.2022 & 13.12.2022ರಲ್ಲಿ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರು ಸಲ್ಲಿಸಿರುತ್ತಾರೆ.

- ಆಯುಕ್ತಾಲಯದ ಪತ್ರ ಸಂಖ್ಯೆ:ಡಿಟಿಇ 26 ಇಎಸ್‌ಟಿ(1) 2021, ದಿ:08.12.2022 & 13.12.2022ರಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ನೀಡಿರುವ ಅವಲೋಕನಗಳನ್ನು ಕರಡು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಸೂಕ್ತವಾಗಿ ಅಳವಡಿಸಿ ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಸರ್ಕಾರದ ಪತ್ರ ಸಂಖ್ಯೆ:ಇಡಿ 48 ಡಿಟಿಇ 2022(ಭಾಗ-1), ದಿ:24.01.2023ರಲ್ಲಿ ತಿಳಿಸಲಾಗಿರುತ್ತದೆ. ಈ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ನೀಡಿರುವ ಅವಲೋಕನಗಳನ್ವಯ ಕರಡು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅಳವಡಿಸಿಕೊಂಡು ಆಯುಕ್ತಾಲಯದ ಪತ್ರ ಸಂಖ್ಯೆ:ಡಿಟಿಇ 26 ಇಎಸ್‌ಟಿ(1) 2021, ದಿ:03.02.2023ರಲ್ಲಿ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮುಂದುವರೆದು, ತಾಂತ್ರಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಪ್ರಸ್ತಾವನೆ ಕುರಿತು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರು ಸಲ್ಲಿಸಿರುವ ಕರಡು ಪ್ರಸ್ತಾವನೆಯನ್ನು ಸರ್ಕಾರದ ಕಡತ ಸಂಖ್ಯೆ:ಇಡಿ 40 ಡಿಟಿಇ 2022(ಭಾಗ-2) ಮತ್ತು (ಭಾಗ-3)ರಲ್ಲಿ ಈಗಾಗಲೇ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ ಮತ್ತು ಆರ್ಥಿಕ ಇಲಾಖೆಯ ಅಭಿಪ್ರಾಯ ಕೋರಿ ಸಲ್ಲಿಸಲಾಗಿದ್ದು, ಸದರಿ ಇಲಾಖೆಗಳು ನೀಡುವ ಅಭಿಪ್ರಾಯಗಳನ್ನು ಸಹ ತಾಂತ್ರಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅಳವಡಿಸಿಕೊಂಡು ಕಾರ್ಯಗತಗೊಳಿಸುವ ಬಗ್ಗೆ ನಿಯಮಾನುಸಾರ ಕ್ರಮ ಜರುಗಿಸಲಾಗುವುದು.

ರಾಜ್ಯದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಇಂಜಿನಿಯರಿಂಗ್, ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಿಗೆ ಮಂಜೂರಾದ ಭರ್ತಿಯಾದ ಹಾಗೂ ಖಾಲಿ ಇರುವ ಬೋಧಕ ಹುದ್ದೆಗಳ ವಿವರ ಈ ಕೆಳಕಂಡಂತಿದೆ.

| **ವೃಂದ** | **ಮಂಜೂರಾದ ಹುದ್ದೆಗಳು** | **ಭರ್ತಿಯಾದ ಹುದ್ದೆಗಳು** | **ಖಾಲಿಯಿರುವ ಹುದ್ದೆಗಳು** |
|---|---|---|---|
| ಎ | 310 | 115 | 195 |
| ಬಿ | 3202 | 2106 | 1096 |
| ಸಿ | 09 | 02 | 07 |
| **ಒಟ್ಟು** | **3521** | **2223** | **1298** |

ಇಲಾಖೆಯ ಸರ್ಕಾರಿ ಸಂಸ್ಥೆಗಳಲ್ಲಿನ ಖಾಲಿ ಇರುವ ಬೋಧಕ ಹುದ್ದೆಗೆದುರಾಗಿ ಸಂಸ್ಥೆಗಳಲ್ಲಿನ ಖಾಯಂ ಬೋಧಕ ವರ್ಗದವರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ಬಳಿಕ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2022-23ನೇ ಸಾಲಿಗೆ ಒಟ್ಟಾರೆ 1640 ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ಪಡೆದುಕೊಂಡು ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗದಂತೆ ಪಾಠ ಪ್ರವಚನ ನಡೆಸಲಾಗುತ್ತಿದೆ.

**ಇಡಿ 20 ಟಿಪಿಇ 2023**

**(ಡಾ|| ಅಶ್ವತ್ಥನಾರಾಯಣ್.ಸಿ.ಎನ್)**
ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಹಾಗೂ ಜೀವನೋಪಾಯ ಇಲಾಖೆ ಸಚಿವರು